ಓ.ಎಸ್.ನಂ.36/2017

ಡಿ ಡಬ್ಲ್ಯೂ: 1

ದಿನಾಂಕ 19.08.2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲು: ವಾದಿ ಪರ ವಕೀಲರಿಂದ:**

ತುಮ್ಮಿನಕಟ್ಟಿ ಗ್ರಾಮದ ಎಲ್ಲಾ ಆಸ್ತಿಗಳು ಮೂಲತಃ ಉತ್ತರಾಧಿಮಠದ ಆಸ್ತಿಗಳು ಎಂದರೆ ಸರಿ. ದಾವಾ ಆಸ್ತಿಯ ಕುರಿತು ನಾನು ಭೂನ್ಯಾಯಾ ಮಂಡಳಿಯಲ್ಲಿ ಯಾವುದೇ ಅರ್ಜಿ ನೀಡಿರುವುದಿಲ್ಲ ಎಂದರೆ ಸರಿ. ಸಾಕ್ಷಿಯು ತನ್ನ ತಂದೆ ಅರ್ಜಿ ಸಲ್ಲಿಸಿ ಆತನ ಹೆಸರಿಗೆ ಮಂಜೂರಾಗಿರುವುದಾಗಿ ನುಡಿಯುತ್ತಾರೆ. ಆ ರೀತಿ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 1947 ರ ಪಹಣಿ ಪತ್ರಿಕೆಯಲ್ಲಿ ದಾವಾ ಆಸ್ತಿಯು ವಾದಿಯ ತಂದೆ ಸಾಗುವಳಿ ಮಾಡುತ್ತಿದ್ದ ಕುರಿತು ಉಲ್ಲೇಖ ಇರುತ್ತದೆ ಎಂದರೆ ಸರಿಯಲ್ಲ. ಅಂದಿನಿಂದ ವಾದಿಯರು ದಾವಾ ಆಸ್ತಿ ಕಬ್ಜಾ ಹೊಂದಿರುತ್ತಾರೆ ಎಂದರೆ ಸರಿಯಲ್ಲ.

2. ಭೂನ್ಯಾಯ ಮಂಡಳಿಯ ಆದೇಶದ ಇರುವುದಾಗಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿಕೊಂಡು ದಾವಾ ಆಸ್ತಿಯನ್ನು ನನ್ನ ಹೆಸರಿಗೆ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನಾವು ಎಂದಿಗೂ ಕಬ್ಜಾ ಇಲ್ಲದಿದ್ದರೂ ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

Sd/-

ಓ ಹೇ ಕೆ ಸರಿ ಇದೆ. ಪ್ರಧಾನ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.